**National**
**Kannada**
**18.02.2026 19.35 hrs**
**ಆಕಾಶವಾಣಿ, ಬೆಂಗಳೂರು**

# ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

1. ನವದೆಹಲಿಯಲ್ಲಿಂದು ವಿಶ್ವನಾಯಕರೊಂದಿಗೆ ಪ್ರಧಾನಿ ನರೇಂದ್ರ ಮೋದಿ ದ್ವಿಪಕ್ಷೀಯ ಮಾತುಕತೆ
2. ಅಭಿವೃದ್ಧಿ ಹೊಂದಿದ ರಾಷ್ಟ್ರವಾಗುವ ಭಾರತದ ಪ್ರಯಾಣದಲ್ಲಿ ಕೃತಕಬುದ್ಧಿಮತ್ತೆ ಆಧಾರಸ್ತಂಭ – ಕೇಂದ್ರ ಸಚಿವ ಅಶ್ವಿನಿ ವೈಷ್ಣವ್
3. ಭಾರತ ಎಐ ಇಂಪ್ಯಾಕ್ಟ್ ಶೃಂಗಸಭೆ ಇದೇ 21ರವರೆಗೆ ವಿಸ್ತರಣೆ
4. ಐಸಿಸಿ ಟಿ–20 ವಿಶ್ವಕಪ್ ಕ್ರಿಕೆಟ್; ನೆದರ್‌ಲ್ಯಾಂಡ್ಸ್ ವಿರುದ್ಧ ಟಾಸ್ ಗೆದ್ದ ಭಾರತ ಬ್ಯಾಟಿಂಗ್ ಆಯ್ಕೆ

***************

ನವದೆಹಲಿಯಲ್ಲಿ ನಡೆಯುತ್ತಿರುವ ಭಾರತ ಎಐ ಇಂಪ್ಯಾಕ್ಟ್ ಶೃಂಗಸಭೆ ನೇಪಥ್ಯದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು, ಹಲವು ವಿಶ್ವ ನಾಯಕರೊಂದಿಗೆ ಸರಣಿ ದ್ವಿಪಕ್ಷೀಯ ಸಭೆಗಳನ್ನು ನಡೆಸಿದರು.

ನವದೆಹಲಿಯ ಹೈದರಾಬಾದ್ ಹೌಸ್‌ನಲ್ಲಿ ಇಂದು ಸ್ಪೇನ್ ಅಧ್ಯಕ್ಷ ಪೆಡ್ರೊ ಸ್ಯಾಂಚೆಜ್ ಅವರೊಂದಿಗೆ ಸಭೆ ನಡೆಸಿದರು. ಆರ್ಥಿಕತೆ, ಡಿಜಿಟಲ್, ನಾವೀನ್ಯತೆ, ಆರೋಗ್ಯ, ಹವಾಮಾನ, ಶಿಕ್ಷಣ ಸೇರಿದಂತೆ ಪ್ರಮುಖ ಕ್ಷೇತ್ರಗಳ ಕುರಿತು ಉಭಯ ನಾಯಕರು ಚರ್ಚಿಸಿದರು ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ.

ಬಳಿಕ ಪ್ರಧಾನಿ ನರೇಂದ್ರ ಮೋದಿ ಅವರು, ಫಿನ್‌ಲ್ಯಾಂಡ್ ಪ್ರಧಾನಿ ಅಂಟಿ ಪೆಟ್ಟೇರಿ ಒರ್ಪೊ ಅವರೊಂದಿಗೆ ಮಾತುಕತೆ ನಡೆಸಿದರು. ಸುಸ್ಥಿರತೆ ಮತ್ತು ಡಿಜಿಟಲೀಕರಣದಲ್ಲಿ ಪರಸ್ಪರ ಸಹಕಾರ ಎಐ ಸಂಶೋಧನೆ ಮತ್ತು ನಾವೀನ್ಯತೆ ಕ್ಷೇತ್ರದಲ್ಲಿ ಉಭಯ ದೇಶಗಳ ನಡುವೆ ದ್ವಿಪಕ್ಷೀಯ ಸಹಯೋಗ ಬಲಪಡಿಸುವ ಕುರಿತು ಇಬ್ಬರೂ ನಾಯಕರು ಚರ್ಚಿಸಿದರು.

ಇದೇ ವೇಳೆ, ಪ್ರಧಾನಿ ಮೋದಿ ಅವರು ಸರ್ಬಿಯಾ ಅಧ್ಯಕ್ಷ ಅಲೆಗ್ಸಾಂಡರ್ ವುಸಿಕ್, ಎಸ್ಟೋನಿಯಾ ಅಧ್ಯಕ್ಷ ಅಲರ್ ಕರಿಸ್, ಭೂತಾನ್ ಪ್ರಧಾನಿ ಶೆರಿನ್ ತೊಬ್ಗೆ ಮತ್ತು ಕಜಕಿಸ್ತಾನ ಪ್ರಧಾನಿ ಒಲ್ಜಾಸ್ ಬೆಕ್ಟೆನೊವ್ ಅವರೊಂದಿಗೆ ಸಭೆಗಳನ್ನು ನಡೆಸಿದರು. ಇದಕ್ಕೂ ಮುನ್ನ ಗೂಗಲ್ ಸಿಇಒ ಸುಂದರ್ ಪಿಚೈ ಅವರು ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದರು.

***************

ಕೇಂದ್ರ ವಿದ್ಯುನ್ಮಾನ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್ ಇಂದು ಉತ್ಪಾದನಾ ಎಂಜಿನಿಯರಿಂಗ್ ತಂತ್ರಜ್ಞಾನಕ್ಕಾಗಿ ಭಾರತ ಕೃತಕಬುದ್ಧಿಮತ್ತೆಯ ಆದ್ಯತೆಗಳನ್ನು ವಿವರಿಸಿದರು.

ನವದೆಹಲಿಯಲ್ಲಿಂದು ನಡೆದ ಭಾರತ ಎಐ ಇಂಪ್ಯಾಕ್ಟ್ ಶೃಂಗಸಭೆಯ ಸಂದರ್ಭದಲ್ಲಿ ಉದ್ಯಮಿಗಳು, ಶಿಕ್ಷಣ ತಜ್ಞರು, ನೀತಿ ನಿರೂಪಕರು ಮತ್ತು ತಜ್ಞರ ಕಾರ್ಯತಂತ್ರದ ಸಮಾವೇಶದ ಅಧ್ಯಕ್ಷತೆವಹಿಸಿ ಮಾತನಾಡಿದ ಸಚಿವರು, ಅಭಿವೃದ್ಧಿ ಹೊಂದಿದ ರಾಷ್ಟ್ರವಾಗುವ ಭಾರತದ ಪ್ರಯಾಣದಲ್ಲಿ ಕೃತಕಬುದ್ಧಿಮತ್ತೆ ಒಂದು ಆಧಾರಸ್ತಂಭವಾಗಿದೆ ಎಂದು ಹೇಳಿದರು.

ಉತ್ಪಾದನೆ ಎಂಜಿನಿಯರಿಂಗ್ ತಂತ್ರಜ್ಞಾನದಾದ್ಯಂತ ಎಐ ಅನ್ನು ಸಂಯೋಜಿಸುವ ಮೂಲಕ ಭಾರತ ಉತ್ಪಾದಕತೆಯನ್ನು ಹೆಚ್ಚಿಸಬಹುದು, ಸ್ಪರ್ಧಾತ್ಮಕತೆಯನ್ನು ಬಲಪಡಿಸಬಹುದು ಹಾಗೂ ನಾವೀನ್ಯತೆ ಮತ್ತು ಉದ್ಯಮಶೀಲತೆಗೆ ಹೊಸ ಅವಕಾಶಗಳನ್ನು ಸೃಷ್ಟಿಸಬಹುದು ಎಂದು ಸಚಿವ ಅಶ್ವಿನಿ ವೈಷ್ಣವ್ ಅಭಿಪ್ರಾಯಪಟ್ಟರು.

***************

ನವದೆಹಲಿಯಲ್ಲಿಂದು ಭಾರತ ಎಐ ಇಂಪ್ಯಾಕ್ಟ್ ಶೃಂಗಸಭೆಯ ಸಂದರ್ಭದಲ್ಲಿ ಕೇಂದ್ರ ಆರೋಗ್ಯ ಸಚಿವ ಜೆ.ಪಿ.ನಡ್ಡಾ ಬ್ರೆಜಿಲ್ ಆರೋಗ್ಯ ಸಚಿವ ಅಲೆಗ್ಸಾಂಡೆರೆ ಪೆಡಿಲ್ಲಾ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದರು.

ಎಲ್ಲರಿಗೂ ಪ್ರವೇಶಿಸಬಹುದಾದ ಮತ್ತು ಕೈಗೆಟುಕುವ ರೀತಿಯಲ್ಲಿ ಆರೋಗ್ಯ ಸೇವೆ ಒದಗಿಸುವ ಕುರಿತು ಉಭಯ ನಾಯಕರು ಚರ್ಚಿಸಿದರು. ಆರೋಗ್ಯ ಮತ್ತು ಔಷಧ ಕ್ಷೇತ್ರಗಳಲ್ಲಿ ಉಭಯ ದೇಶಗಳ ನಡುವೆ ಬಲವಾದ ಸಹಕಾರದ ಅಗತ್ಯವನ್ನು ಎರಡೂ ಕಡೆಯವರು ಒತ್ತಿ ಹೇಳಿದರು.

***************

ಕೇಂದ್ರ ಸರ್ಕಾರ ಭಾರತ ಎಐ ಇಂಪ್ಯಾಕ್ಟ್ ಶೃಂಗಸಭೆಯನ್ನು ಇದೇ 21ರವರೆಗೆ ಒಂದು ದಿನ ವಿಸ್ತರಿಸಿದೆ.

ನವದೆಹಲಿಯಲ್ಲಿ ಈ ಕುರಿತು ಮಾಹಿತಿ ನೀಡಿದ ಕೇಂದ್ರ ವಿದ್ಯುನ್ಮಾನ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯದ ಕಾರ್ಯದರ್ಶಿ ಎಸ್.ಕೃಷ್ಣನ್, ಪ್ರದರ್ಶಕರು, ನಾವೀನ್ಯಕಾರರು ಮತ್ತು ಸಂದರ್ಶಕರಿಂದ ಅಗಾಧ ಪ್ರತಿಕ್ರಿಯೆ ವ್ಯಕ್ತವಾಗಿರುವುದರಿಂದ ಈ ಕ್ರಮ ಕೈಗೊಳ್ಳಲಾಗಿದೆ. ಇದೇ 20 ಮತ್ತು 21 ರಂದು ಶೃಂಗಸಭೆ ರಾತ್ರಿ 8 ಗಂಟೆಯವರೆಗೆ ತೆರೆದಿರುತ್ತದೆ. ಇದೇ ವೇಳೆ, ನಾಳೆ ಶೃಂಗಸಭೆ ಸಾರ್ವಜನಿಕರಿಗೆ ಮುಚ್ಚಲ್ಪಟ್ಟುತ್ತದೆ ಮತ್ತು ಆಹ್ವಾನಿತ ಅತಿಥಿಗಳಿಗೆ ಮಾತ್ರ ತೆರೆದಿರುತ್ತದೆ ಎಂದು ತಿಳಿಸಿದರು.

***************

ರಾಷ್ಟ್ರಪತಿ ದ್ರೌಪದಿ ಮುರ್ಮು ಇಂದು ವಿಶಾಖಪಟ್ಟಣದಲ್ಲಿ ಸಶಸ್ತ್ರ ಪಡೆಗಳ ಸರ್ವೋಚ್ಚ ಕಮಾಂಡರ್ ಆಗಿ ಅಂತಾರಾಷ್ಟ್ರೀಯ ನೌಕಾಪಡೆ ವಿಮರ್ಶೆ– ಐಎಫ್ಆರ್ 2026 ಅನ್ನು ಪರಿಶೀಲಿಸಿದರು.

ಪೂರ್ವ ನೌಕಾ ಕಮಾಂಡ್‌ನಿಂದ ಗೌರವ ವಂದನೆ ಸ್ವೀಕರಿಸಿದ ರಾಷ್ಟ್ರಪತಿ ಅವರನ್ನು ಹಿರಿಯ ನೌಕಾ ಅಧಿಕಾರಿಗಳು ಸ್ವಾಗತಿಸಿದರು. ರಾಷ್ಟ್ರಪತಿಗಳ ವಿಹಾರ ನೌಕೆಯಾದ ಐಎನ್ಎಸ್ ಸುಮೇಧಾದಲ್ಲಿ, ಪ್ರಯಾಣಿಸಿದ ರಾಷ್ಟ್ರಪತಿ ದ್ರೌಪದಿ ಮುರ್ಮು, ವಿಶಾಖಪಟ್ಟಣಂ ಕರಾವಳಿಯಲ್ಲಿದ್ದ ಭಾರತೀಯ ಮತ್ತು ವಿದೇಶಿ ನೌಕಾ ಹಡಗುಗಳ ಪ್ರಭಾವಶಾಲಿ ಶ್ರೇಣಿಯನ್ನು ಪರಿಶೀಲಿಸಿದರು.

ಐಎಫ್ಆರ್ ಕಡಲ ಭದ್ರತೆಯನ್ನು ಹೆಚ್ಚಿಸುವ ಮತ್ತು ಮಿತ್ರ ರಾಷ್ಟ್ರಗಳ ನಡುವೆ ಸಹಕಾರ ಬೆಳೆಸುವ ಗುರಿ ಹೊಂದಿದೆ. ಈ ಕಾರ್ಯಕ್ರಮದಲ್ಲಿ ಆಂಧ್ರಪ್ರದೇಶದ ರಾಜ್ಯಪಾಲ ಎಸ್.ಅಬ್ದುಲ್ ನಜೀರ್, ಮುಖ್ಯಮಂತ್ರಿ ಎನ್.ಚಂದ್ರಬಾಬು ನಾಯ್ಡು, ಕೇಂದ್ರ ಸಚಿವ ಕೆ.ರಾಮ್ ಮೋಹನ್ ನಾಯ್ಡು, ರಕ್ಷಣಾ ಸಿಬ್ಬಂದಿ ಮುಖ್ಯಸ್ಥ ಜನರಲ್ ಅನಿಲ್ ಚೌಹಾಣ್ ಮತ್ತು ಇತರ ಹಿರಿಯ ಸರ್ಕಾರಿ ಅಧಿಕಾರಿಗಳು ಭಾಗವಹಿಸಿದ್ದರು.

ವಿಶಾಖಪಟ್ಟಣಂ 2016 ರಿಂದ ಎರಡನೇ ಬಾರಿಗೆ ಅಂತಾರಾಷ್ಟ್ರೀಯ ನೌಕಾಪಡೆ ವಿಮರ್ಶೆಯನ್ನು ಆಯೋಜಿಸುತ್ತಿದೆ, ಇದು ಪ್ರಮುಖ ಕಡಲ ಕೇಂದ್ರ ಮತ್ತು ಅಂತಾರಾಷ್ಟ್ರೀಯ ನೌಕಾ ಏಕತೆಯ ಸಂಕೇತವಾಗಿ ತನ್ನ ಸ್ಥಾನಮಾನವನ್ನು ಪುನರುಚ್ಚರಿಸುತ್ತದೆ.

***************

ಕೇಂದ್ರ ಸಂವಹನ ಸಚಿವ ಜ್ಯೋತಿರಾಧಿತ್ಯ ಸಿಂಧಿಯಾ ನವದೆಹಲಿಯಲ್ಲಿ ಇಂದು ಸ್ವೀಡನ್ ಉಪ ಪ್ರಧಾನಿ ಎಬ್ಬಾ ಬುಷ್ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದರು.

ಭಾರತ ಮತ್ತು ಸ್ವೀಡನ್ ಬಲವಾದ, ಭವಿಷ್ಯಕ್ಕೆ ಸಿದ್ಧವಾದ ಡಿಜಿಟಲ್ ಮತ್ತು ದೂರಸಂಪರ್ಕ ಪಾಲುದಾರಿಕೆ ನಿರ್ಮಿಸಲು ಸಜ್ಜಾಗಿದೆ ಎಂದು ಸಾಮಾಜಿಕ ಜಾಲತಾಣದಲ್ಲಿ ಸಚಿವ ಜ್ಯೋತಿರಾಧಿತ್ಯ ಸಿಂಧಿಯಾ ಹೇಳಿದ್ದಾರೆ.

ಇದಕ್ಕೂ ಮುನ್ನ ಜರ್ಮನ್ ಸಚಿವ ಡಾ.ಕಾರ್ಸ್ಟನ್ ವೈಲ್ಡ್‌ಬರ್ಗರ್ ಅವರನ್ನು ಸಿಂಧಿಯಾ ಭೇಟಿಯಾಗಿ ಮಾತುಕತೆ ನಡೆಸಿದರು.

ಜರ್ಮನಿಯ ಅತ್ಯಾಧುನಿಕ ತಂತ್ರಜ್ಞಾನ ಹಾಗೂ ಭಾರತದ ಎಂಜಿನಿಯರಿಂಗ್ ಶ್ರೇಷ್ಠತೆ ಉಭಯ ದೇಶಗಳಿಗೆ ಭವಿಷ್ಯಕ್ಕೆ ಸಿದ್ಧವಾದ ಫಲಿತಾಂಶಗಳನ್ನು ನೀಡಬಹುದು ಎಂದು ಸಂವಹನ ಸಚಿವರು ಅಭಿಪ್ರಾಯಪಟ್ಟಿದ್ದಾರೆ.

***************

ಕೇಂದ್ರ ಚುನಾವಣಾ ಆಯೋಗ ಇಂದು 10 ರಾಜ್ಯಗಳ 37 ರಾಜ್ಯಸಭಾ ಸ್ಥಾನಗಳಿಗೆ ಚುನಾವಣೆ ಘೋಷಿಸಿದೆ.

ಈ ತಿಂಗಳ 26 ರಂದು ಚುನಾವಣೆಗೆ ಅಧಿಸೂಚನೆ ಹೊರಡಿಸಲಾಗುವುದು ಮತ್ತು ಮಾರ್ಚ್ 5 ರವರೆಗೆ ನಾಮಪತ್ರ ಸಲ್ಲಿಸಬಹುದಾಗಿದ್ದು, ಮಾರ್ಚ್ 16 ರಂದು ಮತದಾನ ನಡೆಯಲಿದೆ.

ಕೇಂದ್ರ ಸಚಿವ ರಾಮನಾಥ್ ಠಾಕೂರ್, ರಾಜ್ಯಸಭಾ ಉಪಾಧ್ಯಕ್ಷ ಹರಿವಂಶ್, ಎನ್‌ಸಿಪಿ-ಎಸ್‌ಪಿ ನಾಯಕ ಶರದ್ ಪವಾರ್ ಅವರು ಮೇಲ್ಮನೆಯಲ್ಲಿ ತಮ್ಮ ಅಧಿಕಾರಾವಧಿಯನ್ನು ಪೂರ್ಣಗೊಳಿಸುತ್ತಿರುವ ಪ್ರಮುಖರಾಗಿದ್ದಾರೆ.

***************

ಬೆಂಗಳೂರಿನ ಇನ್ಸ್ಟಿಟ್ಯೂಟ್ ಆಫ್ ಹೋಟೆಲ್ ಮ್ಯಾನೇಜ್‌ಮೆಂಟ್-ಐಎಚ್‌ಎಂ ನಲ್ಲಿ ಕೇಂದ್ರ ಪ್ರವಾಸೋದ್ಯಮ ಸಚಿವಾಲಯದ ವತಿಯಿಂದ ಆಯೋಜಿಸಿದ್ದ 'ದೇಶ್ ಅಪ್ನಾ ದೇಶ್' ಶಾಲಾ ಸ್ಪರ್ಧೆಯಲ್ಲಿ ವಿವಿಧ ವಿಭಾಗಗಳಲ್ಲಿ ಪ್ರಶಸ್ತಿ ವಿಜೇತರಾದವರಿಗೆ ಇಂದು ಪ್ರಶಸ್ತಿ ಪ್ರದಾನ ಮಾಡಲಾಯಿತು.

ಸ್ಪರ್ಧೆಯಲ್ಲಿ 8ನೇ ತರಗತಿಯಿಂದ 11ನೇ ತರಗತಿವರೆಗಿನ ವಿದ್ಯಾರ್ಥಿಗಳು ಭಾಗವಹಿಸಿದ್ದರು. ಒಟ್ಟು 110 ಶಾಲೆಗಳ ವಿದ್ಯಾರ್ಥಿಗಳು ಈ ಸ್ಪರ್ಧೆಯಲ್ಲಿ ಪಾಲ್ಗೊಂಡಿದ್ದರು. ವಿದ್ಯಾರ್ಥಿಗಳಲ್ಲಿ ಸಾಮರ್ಥ್ಯ ಬೆಳವಣಿಗೆ ಮತ್ತು ಸೂಕ್ತ ವೃತ್ತಿ ಆಯ್ಕೆಯ ಜೊತೆಗೆ ಭಾರತದ ಹೆಮ್ಮೆಯ ಪ್ರವಾಸಿ ತಾಣಗಳ ಕುರಿತು ಅರಿವು ಮೂಡಿಸುವುದು ಈ ಸ್ಪರ್ಧೆಯ ಉದ್ದೇಶವಾಗಿತ್ತು.

ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ದಕ್ಷಿಣ ಭಾರತ ಹೋಟೆಲ್‌ಗಳ ಸಂಘದ ಅಧ್ಯಕ್ಷ ಶಾಮರಾಜು, ಕರ್ನಾಟಕ ಪ್ರವಾಸೋದ್ಯಮ ಸೊಸೈಟಿಯ ಕಾರ್ಯದರ್ಶಿ ಎಚ್.ಜಗದೀಶ್ ಸೇರಿದಂತೆ ವಿವಿಧ ಗಣ್ಯರು ಉಪಸ್ಥಿತರಿದ್ದರು.

***************

ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ಇಂದು ನಡೆಯುತ್ತಿರುವ ಐಸಿಸಿ ಟಿ-20 ವಿಶ್ವಕಪ್ ಕ್ರಿಕೆಟ್ ಪಂದ್ಯಾವಳಿಯ ಎ ಗುಂಪಿನ ಪಂದ್ಯದಲ್ಲಿ ಭಾರತ ಮತ್ತು ನೆದರ್‌ಲ್ಯಾಂಡ್ಸ್ ತಂಡಗಳು ಮುಖಾಮುಖಿಯಾಗಿವೆ. ಟಾಸ್ ಗೆದ್ದ ಭಾರತ ಬ್ಯಾಟಿಂಗ್ ಆಯ್ಕೆ ಮಾಡಿಕೊಂಡಿದೆ. ಇತ್ತೀಚಿನ ವರದಿ ಬಂದಾಗ ಭಾರತ, 7.5 ಓವರ್‌ಗಳಲ್ಲಿ 2 ವಿಕೆಟ್ ನಷ್ಟಕ್ಕೆ 59 ರನ್ ಗಳಿಸಿ ಆಡುತ್ತಿದೆ.

ಇದಕ್ಕೂ ಮುನ್ನ ದೆಹಲಿಯ ಅರುಣ್‌ಜೇಟ್ಲಿ ಕ್ರಿಕೆಟ್ ಕ್ರೀಡಾಂಗಣದಲ್ಲಿ ಇಂದು ನಡೆದ ಡಿ ಗುಂಪಿನ ಪಂದ್ಯದಲ್ಲಿ ಯುಎಇ ವಿರುದ್ಧ ದಕ್ಷಿಣ ಆಫ್ರಿಕಾ 6 ವಿಕೆಟ್‌ಗಳಿಂದ ಭರ್ಜರಿ ಜಯ ಸಾಧಿಸಿದೆ. ಮೊದಲು ಬ್ಯಾಟಿಂಗ್ ಮಾಡಿದ ಯುಎಇ ನಿಗದಿತ 20 ಓವರ್‌ಗಳಲ್ಲಿ 6 ವಿಕೆಟ್ ನಷ್ಟಕ್ಕೆ 122 ರನ್ ಗಳಿಸಿದೆ. ಗೆಲುವಿನ ಗುರಿ ಬೆನ್ನತ್ತಿರುವ ದಕ್ಷಿಣ ಆಫ್ರಿಕಾ 13.2 ಓವರ್‌ಗಳಲ್ಲಿ 4 ವಿಕೆಟ್ ನಷ್ಟಕ್ಕೆ 123 ರನ್ ಗಳಿಸಿ ಗೆಲುವಿನ ನಗೆ ಬೀರಿತು.

ಕೊಲಂಬೊದ ಸಿನ್ಹಳಿಸ್ ಸ್ಪೋರ್ಟ್ಸ್ ಕ್ಲಬ್ ಕ್ರೀಡಾಂಗಣದಲ್ಲಿ ನಡೆದ ಎ ಗುಂಪಿನ ಪಂದ್ಯದಲ್ಲಿ ನಮೀಬಿಯಾ ವಿರುದ್ಧ ಪಾಕಿಸ್ತಾನ 102 ರನ್‌ಗಳಿಂದ ಗೆಲುವು ಸಾಧಿಸಿದೆ. ಮೊದಲು ಬ್ಯಾಟಿಂಗ್ ಮಾಡಿದ್ದ ಪಾಕಿಸ್ತಾನ ನಿಗದಿತ 20 ಓವರ್‌ಗಳಲ್ಲಿ 3 ವಿಕೆಟ್ ನಷ್ಟಕ್ಕೆ 199 ರನ್ ಗಳಿಸಿತ್ತು. ಗೆಲುವಿನ ಗುರಿ ಬೆನ್ನತ್ತಿದ್ದ ನವಿಬಿಯಾ 17.3 ಓವರ್‌ಗಳಲ್ಲಿ 97 ರನ್‌ಗಳಿಗೆ ತನ್ನೆಲ್ಲಾ ವಿಕೆಟ್‌ಗಳನ್ನು ಕಳೆದುಕೊಂಡಿತು.

***************

ಚೀನಾದ ಹುಬೈ ಪ್ರಾಂತ್ಯದ ಪಟಾಕಿ ಅಂಗಡಿಯಲ್ಲಿಂದು ಸಂಭವಿಸಿದ ಸ್ಫೋಟದಲ್ಲಿ 12 ಜನರು ಮೃತಪಟ್ಟಿದ್ದಾರೆ. ಚೀನಾ ನೂತನ ವರ್ಷ ಆಚರಿಸುತ್ತಿರುವ ಈ ಸಂದರ್ಭದಲ್ಲಿ ನಡೆದ ಎರಡನೇ ಘಟನೆ ಇದಾಗಿದೆ.

ಕಳೆದ ಭಾನುವಾರ ಜಿಯಾಂಗ್ಸು ಪ್ರಾಂತ್ಯದ ಪಟಾಕಿ ಅಂಗಡಿಯೊಂದರಲ್ಲಿ ಸಂಭವಿಸಿದ ಮತ್ತೊಂದು ಅವಘಡದಲ್ಲಿ 8 ಜನರು ಸಾವನ್ನಪ್ಪಿದ್ದು, ಇತರ ಇಬ್ಬರು ಗಾಯಗೊಂಡಿದ್ದರು.

***************

ಮುಂಬೈ ಷೇರು ಮಾರುಕಟ್ಟೆಯಲ್ಲಿಂದು ಷೇರು ಸಂವೇದಿ ಸೂಚ್ಯಂಕ ಸೆನ್ಸೆಕ್ಸ್ **283** ಅಂಕಗಳು ಏರಿಕೆಯಾಗಿದ್ದು, ದಿನದ ಅಂತ್ಯಕ್ಕೆ **83** ಸಾವಿರದ **734** ಅಂಕಗಳು ದಾಖಲಾಗಿದೆ.

ಇದೇ ವೇಳೆ ರಾಷ್ಟ್ರೀಯ ಸಂವೇದಿ ಸೂಚ್ಯಂಕ–ನಿಫ್ಟಿ **94** ಅಂಕಗಳು ಏರಿಕೆ ಕಂಡಿದ್ದು, ದಿನದ ಅಂತ್ಯಕ್ಕೆ **25** ಸಾವಿರದ **819** ಅಂಕಗಳು ದಾಖಲಾಗಿದೆ.

********ಮುಕ್ತಾಯ*******